| |
|---|
| **Deposition Sheets (RP.No.57)**<br>**Form No.4** |

**IN THE COURT OF PRL. CIVIL JUDGE & J.M.F.C., KARKALA.**

**Criminal Case No. 1247/2023**

ಪಿ.ಡಬ್ಲ್ಯು : 4 ಸಿ.ಡಬ್ಲ್ಯು : 5

ಸಾಕ್ಷಿದಾರನ ಹೆಸರು : ರಮೇಶ್ ಪೂಜಾರಿ
ತಂದೆಯ ಹೆಸರು : ಲೋಕಯ್ಯ ಪೂಜಾರಿ
ಪ್ರಾಯ : 58 ವರ್ಷ
ಉದ್ಯೋಗ : ಕೃಷಿ
ವಾಸ : ಕುಂಟಾಡಿ

ದಿನಾಂಕ 20-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-

ಆರೋಪಿತರನ್ನು ನೋಡಿದರೆ ಗುರುತಿಸಲು ಸಾಧ್ಯವಿಲ್ಲ. ಸಾಕ್ಷಿಯು ವಿ.ಸಿ ಮೂಲಕ ಹಾಜರುಪಡಿಸಿದ 2 ನೇ ಆರೋಪಿಯನ್ನು ನೋಡಿ ಗುರುತಿಸಿರುವುದಿಲ್ಲ.

ಚಾಸಾ-1 ರಿಂದ ಚಾಸಾ-4 ರವರ ಪರಿಚಯ ಇದೆ. ಅವರು ನಮ್ಮ ನೆರೆಕರೆಯವರು.

ಸುಮಾರು 5 ವರ್ಷಗಳ ಹಿಂದೆ ಚಾಸಾ-1 ರವರ ಮನೆಯಲ್ಲಿ ಕಳ್ಳತನವಾಗಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಮತ್ತು ಚಾಸಾ-4 ರವರು ಚಾಸಾ-1 ರವರ ಮನೆಗೆ ಹೋಗಿರುವುದಿಲ್ಲ. ಚಾಸಾ-1 ರವರು ನನಗೆ ಯಾವುದೇ ಕಳ್ಳತನವಾದ ವಿಚಾರವನ್ನು ತಿಳಿಸಿರುವುದಿಲ್ಲ. ಈ ಕುರಿತು ನಾನು ಪೋಲಿಸರ ಮುಂದೆ ಹೇಳಿಕೆಯನ್ನು ನೀಡಿರುವುದಿಲ್ಲ. ಚಾಸಾ-1 ರವರು ಆರೋಪಿತರ ವಿರುದ್ಧ ಪ್ರಕರಣ ದಾಖಲಿಸಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಈ ಪ್ರಕರಣದಲ್ಲಿ ಆರೋಪಿತರನ್ನು ಬಂಧಿಸಿ ಅವರನ್ನು ವಿಚಾರಣೆ ಮಾಡಿದ ಬಗ್ಗೆ ಹಾಗೂ 1 ನೇ ಆರೋಪಿ ಚಾಸಾ-1 ರವರ ಮನೆಯಲ್ಲಿ ಕಳ್ಳತನ ಮಾಡಿರುವ ವಿಚಾರ

ಒಪ್ಪಿಕೊಂಡಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. 2 ನೇ ಅರೋಪಿಯನ್ನು ಬಂಧಿಸಿ ಆತನನ್ನು ಪೋಲಿಸ್ ಅಭಿರಕ್ಷೆಗೆ ಪಡೆದು, ಚಾಸಾ-1 ರವರ ಮನೆಗೆ ಕರೆದುಕೊಂಡು ಬಂದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಚಿನ್ನಾಭರಣಗಳನ್ನು 1 ನೇ ಆರೋಪಿಯಿಂದ ಸ್ವಾಧೀನಪಡಿಸಿಕೊಂಡ ಬಗ್ಗೆ ಹಾಗೂ ಅಕ್ಕಸಾಲಿಗರಿಂದ ಪರಿಶೀಲನೆ ನಡೆಸಿ, ಅದನ್ನು ಚಾಸಾ-1 ರವರಿಗೆ ತೋರಿಸಿದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಈ ಕುರಿತು ನಾನು ಯಾವುದೇ ಮರುಹೇಳಿಕೆಗಳನ್ನು ನೀಡಿರುವುದಿಲ್ಲ. ಸಾಕ್ಷಿಗೆ ಕಡತದಲ್ಲಿರುವ ಚಿನ್ನಾಭರಣಗಳ ಭಾವಚಿತ್ರಗಳನ್ನು ತೋರಿಸಿದ್ದು, ಅವುಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ</u>   <u>ಸಹಾಯಕ ಸರ್ಕಾರಿ ಅಭಿಯೋಜಕರುಃ-</u>

ಈಗ ನನಗೆ ಓದಿ ಹೇಳಿದಂತೆ ಪೋಲಿಸರ ಮುಂದೆ ನಾನು ದಿಃ 20-07-2021 ರಂದು ಹೇಳಿಕೆಯನ್ನು, ದಿಃ 05-05-2023 ಹಾಗೂ ದಿಃ 20-05-2023 ರಂದು ಮರುಹೇಳಿಕೆಗಳನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆ ಹಾಗೂ ಮರುಹೇಳಿಕೆಗಳನ್ನು ಕ್ರಮವಾಗಿ ನಿಪಿ-8 ರಿಂದ 10 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು :</u> ಆರೋಪಿ ಪರ : ಶ್ರೀಮತಿ ವಿ.ಟಿ.ಬಿ ವಕೀಲರಿಂದಃ ಏನೂ ಇಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ